ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು -1**

ಸಂಖ್ಯೆ ಸಿ1(2)ಶಿ.ಗೈ.ಹಾ.ಬಗ್ಗೆ- 96/2018-19 ದಿನಾಂಕ:2-02-2019

**ಸುತ್ತೋಲೆ**

**ವಿಷಯ:-** ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ ಶಿಕ್ಷಕರು ಗೈರು ಹಾಜರಾಗುತ್ತಿರುವ ಬಗ್ಗೆ.

**ಉಲ್ಲೇಖ:-**ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 18.01.2019ರಂದು ನಡೆದ ಮಾಸಿಕ ಸಭೆಯಲ್ಲಿ ಕೈಗೊಂಡ ನಿರ್ಣಯ.

&&&&&&

ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ: 18.01.2019ರಂದು ನಡೆದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಹಲವು ವಿಷಯಗಳ ಬಗ್ಗೆ ಚರ್ಚಿಸಿ ನಿರ್ಣಯ ಕೈಗೊಳ್ಳಲಾಗಿರುತ್ತದೆ.

ಸಭೆಯ ನಡವಳಿ ಕ್ರಮ ಸಂಖ್ಯೆ: 13ರಲ್ಲಿರುವಂತೆ ಇತ್ತೀಚಿನ ಎ.ಎಸ್.ಆರ್ ವರದಿಯಂತೆ ಶೇಕಡ 33ಕ್ಕಿಂತ ಹೆಚ್ಚಿನ ಶಿಕ್ಷಕರು ಗೈರು ಹಾಜರಾಗುತ್ತಿರುವ ಅಂಶವನ್ನು ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. ಇದರಿಂದ ಶಾಲಾ ಚಟುವಟಿಕೆಗಳಿಗೆ ತೊಂದರೆಯಾಗುವುದಲ್ಲದೆ. ಶೈಕ್ಷಣಿಕ ಗುಣ ಮಟ್ಟವೂ ಸಹ ಕುಸಿಯಲು ಕಾರಣವಾಗುತ್ತದೆ. ಶಿಕ್ಷಕರ ಗೈರು ಹಾಜರಾಗುವ ಅಂಶವನ್ನು ಸಭೆಯಲ್ಲಿ ಗಂಭೀರವಾಗಿ ಚರ್ಚಿಸಲಾಗಿರುತ್ತದೆ. ಶಿಕ್ಷಕರ ಹಾಜರಾತಿಯ ಬಗ್ಗೆ ನಿಗಾವಹಿಸಲು ಸೂಕ್ತ ಕ್ರಮ ವಹಿಸುವಂತೆ ಮತ್ತು ಈ ಬಗ್ಗೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುಸ್ತುವಾರಿ ವಹಿಸುವಂತೆ ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ)ರವರು ನಿರ್ದೇಶನ ನೀಡಿರುತ್ತಾರೆ.

ಈ ಸಂಬಂಧ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ತಾಲ್ಲೂಕಿನ ವ್ಯಾಪ್ತಿಗೆ ಒಳಪಡುವ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಿಕ್ಷಕರ ಹಾಜರಾತಿ ಬಗ್ಗೆ ಪ್ರತಿ ಮಾಹೆ ಪರಿಶೀಲಿಸುವುದು ಕಡ್ಡಾಯವಾಗಿರುತ್ತದೆ. ಇಲಾಖೆಯ ಪೂರ್ವಾನುಮತಿ ಇಲ್ಲದೆ ಅನಗತ್ಯವಾಗಿ ಗೈರು ಹಾಜರಾಗುವ ಶಿಕ್ಷಕರ ಮೇಲೆ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಗಳು 1957ರ ನಿಯಮಗಳಡಿಯಲ್ಲಿ ಶಿಸ್ತುಕ್ರಮ ಜರುಗಿಸುವುದು. ಅಥವಾ ಅಗತ್ಯವಿದ್ದಲ್ಲಿ ಶಿಸ್ತು ಕ್ರಮ ಜರುಗಿಸಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸತಕ್ಕದ್ದು. ದೀರ್ಘಕಾಲದಿಂದ ಶಿಕ್ಷಕರು ಗೈರು ಹಾಜರಾಗಿರುವ ಹಾಗೂ ಆಗಿಂದಾಗೆ ಗೈರು

ಹಾಜರಾಗುತ್ತಿರುವ ಪ್ರಕರಣಗಳಿದ್ದಲ್ಲಿ ತಕ್ಷಣ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯೊಂದಿಗೆ ಶೈಕ್ಷಣಿಕ ಪ್ರಗತಿಗೆ ದಕ್ಕೆಯಾಗದಂತೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪರ್ಯಾಯ ವ್ಯವಸ್ಥೆ ಮಾಡಲು ತಿಳಿಸಿದೆ.

ಇದಲ್ಲದೆ ಇಲಾಖೆಯಿಂದ ಈಗಾಗಲೆ ನಿಗದಿ ಪಡಿಸಿರುವ ಗುರಿಯಂತೆ ಶಾಲಾ ಭೇಟಿ ಸಂದರ್ಭದಲ್ಲಿ ಶಾಲಾ ಶೈಕ್ಷಣಿಕ ಪ್ರಗತಿ ಬಗ್ಗೆ ಮೌಲ್ಯಮಾಪನ ಮಾಡುವುದೂ ಸಹ ಕಡ್ಡಾಯವಾಗಿರುತ್ತದೆ. ಈ ಕುರಿತು ಶಾಲಾ ಶಿಕ್ಷಕರ ಅನಗತ್ಯ ಗೈರು ಹಾಜರಿ ಮತ್ತು ಶೈಕ್ಷಣಿಕ ಪ್ರಗತಿ ಬಗ್ಗೆ ಮಾಹೆವಾರು ವರದಿಯನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ ಕಡ್ಡಾಯವಾಗಿ ಸಲ್ಲಿಸಲು ತಿಳಿಸಿದೆ.

ಮೇಲ್ಕಂಡ ಸೂಚನೆಗಳನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕಡ್ಡಾಯವಾಗಿ ಅನುಪಾಲನೆ ಮಾಡತಕ್ಕದ್ದು. ಈ ಸೂಚನೆಗಳನ್ನು ಪಾಲಿಸದೆ ಲೋಪ ದೋಷಗಳು ಕಂಡು ಬಂದಲ್ಲಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳವರನ್ನೇ ನೇರ ಹೊಣೆಗಾರರನ್ನಾಗಿಸುವುದಲ್ಲದೆ. ಅಂತಹ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲು ನಿಯಮಾನುಸಾರ ಅಗತ್ಯ ಕ್ರಮ ವಹಿಸಲಾಗುವುದೆಂದು ಸ್ಪಷ್ಟಪಡಿಸಿದೆ.

[ಡಾ॥ ಪಿ.ಸಿ. ಜಾಫರ್]
ಆಯುಕ್ತರು

ಗೆ,

ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ,

ಪ್ರತಿಯನ್ನು:

1. ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು–560 001ರವರಿಗೆ ಗೌರಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಢ / ಕಲುಬುರಗಿ
3. ಎಲ್ಲಾ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ,
4. ಎಲ್ಲಾ ವಿಭಾಗಿಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ,
5. ರಾಜ್ಯದ ಎಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ,
4. ಕಛೇರಿ ಪ್ರತಿ

d:\pradeep kumar\2018-19\suthole beo.docx